ಶಿವಮೊಗ್ಗ ನಗರದಲ್ಲಿ ಖಾಸಗಿ ಬಸ್ ನಿಲ್ದಾಣ.

1490(2 107)

ಶ್ರೀ ಕೆ.ಎಸ್.ಈಶ್ವರಪ್ಪ(ಶಿವಮೊಗ್ಗ): ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಿಲ್ಲಾ ಕೇಂದ್ರವಾದ ಶಿವಮೊಗ್ಗ ನಗರದಲ್ಲಿ ಸೂಕ್ತವಾದ ಹಾಗೂ ವ್ಯವಸ್ಥಿತವಾದ ಖಾಸಗಿ ಬಸ್‌ಗಳ ನಿಲ್ದಾಣವಿಲ್ಲದೇ ಪ್ರಯಾಣಿಕರು ಹಾಗೂ ಬಸ್ ಮಾಲೀಕರು ಪಡುತ್ತಿರುವ ಬವಣೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಸುವ್ಯವಸ್ಥಿತ ಹೊಸ ಖಾಸಗಿ ಬಸ್ ನಿಲ್ದಾಣ ಕಟ್ಟಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು;

ಶ್ರೀ ಮಿರಾಜುದ್ದೀನ್ ಎನ್.ಪಟೇಲ್ (ಪೌರಾಡಳಿತ ರಾಜ್ಯ ಸಚಿವರು):

ಅ) ಹೌದು.

ಆ) ಶಿವಮೊಗ್ಗ ನಗರದಲ್ಲಿ ಹೊಸ ಖಾಸಗಿ ಬಸ್ ನಿಲ್ದಾಣ ಮಾಡಲು ಬಿ.ಹೆಚ್. ರಸ್ತೆಗೆ ಹೊಂದಿಕೊಂಡಿರುವ ಪೋಲೀಸ್ ಇಲಾಖೆಗೆ ಸೇರಿದ ಪೋಲೀಸ್ ಕವಾಯತ್ ಮೈದಾನವೆಂದು ಕರೆಯುವ ಸರ್ಕಾರಿ ಖರಾಬು 03 ಎಕರೆ 03 ಗುಂಟೆ ಜಾಗವನ್ನು ಖಾಸಗಿ ಬಸ್ ನಿಲ್ದಾಣಕ್ಕಾಗಿ ವರ್ಗಾಯಿಸುವ ಪ್ರಸ್ತಾವನೆಯು ಸಚಿವ ಸಂಪುಟದ ಮುಂದೆ ತೀರ್ಮಾನಕ್ಕಾಗಿ ಬಾಕಿ ಇರುತ್ತದೆ.

ಶಿವಮೊಗ್ಗ ನಗರದಲ್ಲಿನ ಅಕ್ರಮ ಮನೆಗಳನ್ನು ಸಕ್ರಮಗೊಳಿಸುವಿಕೆ.

149 1(2 108)

ಶ್ರೀ ಕೆ.ಎಸ್.ಈಶ್ವರಪ್ಪ (ಶಿವಮೊಗ್ಗ): ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ನಗರದಲ್ಲಿ ಸರ್ಕಾರಿ ಜಾಗ ಮತ್ತು ನಗರಸಭಾ ಜಾಗದಲ್ಲಿ ಅಕ್ರಮವಾಗಿ ಕಟ್ಟಿಕೊಂಡಿರುವ ಮನೆಗಳನ್ನು ಸಕ್ರಮಗೊಳಿಸಲು ಬಂದ ಅರ್ಜಿಗಳ ಸಂಖ್ಯೆ ಎಷ್ಟು?

ಆ) ಅವುಗಳನ್ನು ಸಕ್ರಮಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಶ್ರೀ ಮಿರಾಜುದ್ದೀನ್ ಎನ್.ಪಟೀಲ್ (ಪೌರಾಡಳಿತ ರಾಜ್ಯ ಸಚಿವರು):

ಅ) ದಿನಾಂಕ: 1- 1-95ಕ್ಕೆ ಅಂತ್ಯಗೊಂಡಂತೆ 36 ಅರ್ಜಿಗಳು ಬಂದಿರುತ್ತವೆ.

ಆ) ಅಕ್ರಮ ಕಟ್ಟಡಗಳ ಸಕ್ರಮ ಕೋರಿ ಬಂದಿರುವ ಅರ್ಜಿಗಳ ಪರಿಶೀಲನೆ ಹಾಗೂ ನಕ್ಷೆ ತಯಾರಿಸುವ ಕೆಲಸ ಪ್ರಗತಿಯಲ್ಲಿದೆ.

ಶಿವಮೊಗ್ಗದಲ್ಲಿ ಅಂಬೇಡ್ಕರ್ ಭವನ ನಿರ್ಮಾಣ

1492(2109)

ಶ್ರೀ ಕೆ.ಎಸ್.ಈಶ್ವರಪ್ಪ (ಶಿವಮೊಗ್ಗ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ನಗರದಲ್ಲಿ ಡಾ: ಅಂಬೇಡ್ಕರ್ ಭವನ ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಡಾ: ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಸರ್ಕಾರದಿಂದ ಒದಗಿಸಲಾಗಿರುವ ಹಣ ಎಷ್ಟು?

ಇ) ಹಣ ಬಿಡುಗಡೆಯಾಗಿಲ್ಲದಿದ್ದರೆ ಆ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು? ಮತ್ತು ಅಂಬೇಡ್ಕರ್ ಭವನ ನಿರ್ಮಾಣ ಕಾರ್ಯ ಯಾವ ಹಂತದಲ್ಲಿದೆ?

ಶ್ರೀ ಕೆ.ಎಂ.ಕೃಷ್ಣರೆಡ್ಡಿ (ಸಮಾಜ ಕಲ್ಯಾಣ ಸಚಿವರು):

ಅ) ಹೌದು.

ಆ) ಸರ್ಕಾರಿ ಆದೇಶ ಸಂಖ್ಯೆ. ಸಕಇ 560 ಪಕವಿ 96, ದಿನಾಂಕ 19-8-98ರ ಪ್ರಕಾರ ಅಂಬೇಡ್ಕರ್ ಭವನ ನಿರ್ಮಾಣಕ್ಕಾಗಿ ರೂ.5.00 ಲಕ್ಷಗಳನ್ನು ಒದಗಿಸಲಾಗಿದೆ.

ಇ) ಸರ್ಕಾರಿ ಆದೇಶ ಸಂ. ಸಕಇ 503 ಪಕವಿ 97 ದಿನಾಂಕ 2-6-99ರಲ್ಲಿ ಅಂಬೇಡ್ಕರ್ ಭವನದ ಕಟ್ಟಡ ನಿರ್ಮಾಣದ ಅಂದಾಜುನಕ್ಷೆಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದ್ದು, ನಿರ್ಮಾಣವು ಪಾಯದ ಹಂತದಲ್ಲಿದೆ. ಸರ್ಕಾರವು ನಿಗದಿಪಡಿಸಿರುವ ಹಣವನ್ನು ಬಿಡುಗಡೆ ಮಾಡುವ ಬಗ್ಗೆ ಮುಂದಿನ ಕ್ರಮವನ್ನು ಕೈಗೊಳ್ಳಲಾಗುತ್ತಿದೆ.